



ಅರುಣ ಪಿ. ಭಟ್ಟ

## ವಾರಭವಿಷ್ಯ 6.05.2021ರಿಂದ 12.05.2021ರವರೆಗೆ




ಈ ವಾರ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ಕೌಟುಂಬಿಕ ಸಂಬಂಧಗಳು ಉತ್ತಮವಾಗಿರುತ್ತದೆ. ಶುಭದಿನ 12. ಶ್ರೀ ದುರ್ಗಾಪಾರಾಯಣ ಮಾಡಿರಿ




ವಾರದ ಶುರುವಿನಲ್ಲಿ ವೈಯಕ್ತಿಕ ವಿಷಯಗಳ ಪರಾಮರ್ಶೆಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಆರೋಗ್ಯದಲ್ಲಿ ಏರುಪೇರಾಗುವ ಸಾಧ್ಯತೆಗಳಿವೆ. ಆಹಾರ– ನೀರು ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಲಿದೆ. ಸಂಗಾತಿ ಹಾಗೂ ಮಕ್ಕಳ ಜತೆಗೂಡಿ ಹಲವು ಕೆಲಸಗಳನ್ನು ಪೂರ್ಣಗೊಳಿಸಲಿದ್ದೀರಿ. ಶುಭದಿನ 8. ವಿಷ್ಣು ಸಹಸ್ರನಾಮ ಪಠಿಸಿರಿ.




ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರದಲ್ಲಿ ಉತ್ತಮ ಹಾಗೂ ಸೂಕ್ತವಾದ ಹಲವು ಅವಕಾಶಗಳು ದೊರೆಯಲಿವೆ. ಗ್ರಹಗತಿಗಳು ಉತ್ತಮವಾಗಿ ಇರುವುದರಿಂದ ನಿಮಗೆ ದೊರೆಯುವ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದ್ದೀರಿ. ಈ ಅವಧಿಯಲ್ಲಿ ನೀವು ಹಾಕುವ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಶುಭದಿನ 9. ಹನುಮಾನ್ ಚಾಲೀಸ್ ಪಠಿಸಿರಿ.




ವಾರದ ಶುರುವಿನಲ್ಲಿ ವೈಯಕ್ತಿಕ ಜೀವನದಲ್ಲಿ ಸಮಸ್ಯೆಗಳು ಎದುರಾಗುತ್ತವೆ. ವಾರದ ಮಧ್ಯ ಭಾಗದ ಹೊತ್ತಿಗೆ ಆರೋಗ್ಯ ಚೇತರಿಸಿಕೊಳ್ಳುತ್ತದೆ. ಕೌಟುಂಬಿಕವಾಗಿ ಸಂತೋಷ ಸಮಾಧಾನ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ವೈಯಕ್ತಿಕ ಸಂಬಂಧ ಮತ್ತು ಆರೋಗ್ಯ ಅತ್ಯುತ್ತಮವಾಗುತ್ತದೆ. ಸಂಬಂಧಗಳು ಸಾಮಾನ್ಯವಾಗಿ ಕಾಣಲು ಆರಂಭಿಸುತ್ತದೆ. ಶುಭದಿನ 11. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಇನ್ನೊಂದು ಕಡೆ ಮನೆಯನ್ನು ಸಲೀಸಾಗಿ ನಡೆಸಲು ಬೇಕಾದ ತೀರ್ಮಾನಗಳನ್ನು ಸರಿಯಾದ ಸಮಯದಲ್ಲಿ ಕೈಗೊಳ್ಳುತ್ತೀರಿ. ವಾರದ ಮಧ್ಯ ಭಾಗದಲ್ಲಿ ನಿದ್ರೆಯ ವಿಚಾರದಲ್ಲಿ ತೊಂದರೆ ಎದುರಾಗಲಿದೆ. ಇದರಿಂದ ವಿಪರೀತ ಬೇಸರ ಆಗುತ್ತದೆ. ಶುಭದಿನ 12. ಸೌಂದರ್ಯಲಹರಿ ಪಠಿಸಿರಿ.




ವ್ಯಾಪಾರದ ಉನ್ನತಿಗೆ ಹೆಚ್ಚು ಶ್ರಮ ಹಾಕಲಿದ್ದೀರಿ. ಇದೇ ವೇಳೆ ಸಣ್ಣ ಪುಟ್ಟ ವರ್ತಕರ ಜತೆಗೆ ಸಂಪರ್ಕ ಸಾಧಿಸಿ, ವ್ಯಾಪಾರ ವಿಸ್ತರಣೆಗೆ ಅಗತ್ಯ ಇರುವ ನಿರ್ಧಾರಗಳನ್ನು ಮಾಡಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಗ್ರಹಗತಿಗಳು ಶುಭ ದೃಷ್ಟಿ ಬೀರುವ ಸಮಯ ಇದು. ಶುಭದಿನ 8. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.




ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಯಶಸ್ಸು ದೊರೆಯುತ್ತದೆ. ಈ ಅವಧಿಯಲ್ಲಿ ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ದೈನಂದಿನ ಕೆಲಸ ಕಾರ್ಯಗಳಲ್ಲಿ ಏರುಪೇರಾಗುವುದರಿಂದ ಕೆಲವರಿಗೆ ರಕ್ತಕ್ಕೆ ಸಂಬಂಧಿಸಿದ ದೋಷಗಳು ಕಾಡಬಹುದು, ಎಚ್ಚರಿಕೆ ಇರಲಿ. ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆಗಳಿವೆ. ಶುಭದಿನ 10. ನವಗ್ರಹ ಸ್ತೋತ್ರ ಪಠಿಸಿರಿ.




ಸಾಮಾಜಿಕ ರಾಜಕೀಯ ಜೀವನದಲ್ಲಿ ನಿಮ್ಮ ಪ್ರಭಾವ ಅಷ್ಟಾಗಿ ಕೆಲಸಕ್ಕೆ ಬರುತ್ತಿಲ್ಲ. ಇದರಿಂದ ಬಹಳ ಚಿಂತೆಗೆ ಒಳಗಾಗುತ್ತೀರಿ. ಹೀಗೆ ದುರ್ಬಲ ಆಗುತ್ತಿರುವ ವರ್ಚಸ್ಸನ್ನು ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ಹೆಚ್ಚಿನ ಕೆಲಸ ಮಾಡುತ್ತೀರಿ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆ ಎದುರಿಸುವ ಸಾಧ್ಯತೆ ಇದೆ. ನಿಂದಿಸುವ ಮೂಲಕ ನಿರಂತರವಾಗಿ ಸಂಬಂಧಕ್ಕೆ ಪೆಟ್ಟಾಗುತ್ತದೆ. ಶುಭದಿನ 10. ಶನಿ ಸ್ತೋತ್ರ ಪಠಣ ಮಾಡಿರಿ.




ಉದ್ಯಮ ನಡೆಸುತ್ತಿರುವವರು ಈಗ ನೀಡುತ್ತಿರುವ ಸೇವೆಗಳ ಜತೆಗೆ ಇನ್ನಷ್ಟು ಸೇರ್ಪಡೆ ಮಾಡಲಿದ್ದೀರಿ. ಈ ಸಮಯದಲ್ಲಿ ಆರೋಗ್ಯ ಚೆನ್ನಾಗಿದೆ ಎಂದು ನಿಮಗೇ ಅನಿಸುತ್ತದೆ. ವೈವಾಹಿಕ ಜೀವನವು ಸಾಮಾನ್ಯವಾಗಿರುತ್ತದೆ. ಬಿಡುವಿಲ್ಲದ ಉದ್ಯೋಗದ ಮಧ್ಯೆಯೂ ಕುಟುಂಬ ಜೀವನಕ್ಕೆ ಹೆಚ್ಚಿನ ಸಮಯವನ್ನು ಇಡಬೇಕಾಗುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ. ಶುಭದಿನ 9. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ವ್ಯವಹಾರದ ಬಗ್ಗೆ ಗಮನ ಹೆಚ್ಚು ನೀಡಬೇಕಾಗುತ್ತದೆ. ಬಹಳ ಕಾಲದಿಂದ ಜಾರಿಗೆ ತರಬೇಕು. ನಿಮ್ಮ ಕೈ ಕೆಳಗೆ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡುತ್ತೀರಿ. ಇನ್ನು ಉತ್ಪಾದನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಣಕಾಸಿನ ಕೊರತೆ ಹಾಗೂ ಕಚ್ಚಾ ವಸ್ತುಗಳ ಕೊರತೆ ಕಾಡಲಿದೆ. ಬಹಳ ಚಿಂತೆಗೆ ಗುರಿಯಾಗಲಿದ್ದೀರಿ. ಶುಭದಿನ 12. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಬಳಿ ಇರುವ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಆ ನಂತರ ಅದರ ಅನುಷ್ಠಾನಕ್ಕಾಗಿ ಹಾಕುವ ಶ್ರಮ ನಿರೀಕ್ಷಿತ ಫಲಿತಾಂಶ ಕೂಡ ದೊರೆಯಲಿದೆ. ಮಾರಾಟ ಕ್ಷೇತ್ರದವರಿಗೆ ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡಂತೆ ತಲುಪುವ ಎಲ್ಲ ಸಾಧ್ಯತೆಗಳಿವೆ. ಶುಭದಿನ 11. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈವರೆಗೆ ಮಾಡಿದ ಕೆಲಸಗಳು ಸರಿಯಾಗಿ ಇವೆಯೇ ಎಂದು ಪರಿಶೀಲನೆ ಮಾಡುವುದಕ್ಕೆ ವಾರದ ಆರಂಭದ ದಿನಗಳು ಮೀಸಲಾಗುತ್ತವೆ. ನೀವು ಯಾರನ್ನು ಆಯ್ಕೆ ಮಾಡಿಕೊಂಡಿರೋ ಅವರಿಗೆ ವಹಿಸಿದ ಕೆಲಸಗಳನ್ನು ಸರಿಯಾಗಿ ಮಾಡುವ ಅರ್ಹತೆ, ತಿಳಿವಳಿಕೆ ಇರುವುದಿಲ್ಲ. ಈಗಲೇ ಈ ವಿಷಯದಲ್ಲಿ ಮುಂದುವರಿದಿರುತ್ತೀರಿ. ಮಗ/ಮಗಳ ಮದುವೆ ನಿಶ್ಚಯ ಮಾಡಲಿದ್ದೀರಿ. ಶುಭದಿನ 8. ಚಂಡಿ ಪಾರಾಯಣ ಮಾಡಿ.